ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಗುರುವಾರ,ದಿನಾಂಕ : 25ನೇ ಜುಲೈ, 2019

32. ಖಾಸಗಿ ಸಾರಿಗೆ ಸಂಸ್ಥೆಗಳು ವಾರಾಂತ್ಯದಲ್ಲಿ ಹೆಚ್ಚಿನ ಬಸ್‌ದರವನ್ನು ವಿಧಿಸುತ್ತಿರುವ ಬಗ್ಗೆ

ಶ್ರೀಸುನೀಲ್ ಗೌಡಬಸನಗೌಡ ಪಾಟೀಲ್(ಸ್ಥಳೀಯಸಂಸ್ಥೆಗಳಿಂದಚುನಾಯಿತರಾದವರು):-

614 (761) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಖಾಸಗಿ ಸಾರಿಗೆ ಸಂಸ್ಥೆಯವರು ವಾರಾಂತ್ಯದಲ್ಲಿ ಮತ್ತು ಹಬ್ಬದ ದಿನಗಳಲ್ಲಿ ನಿಗದಿತ ಪ್ರಯಾಣ ದರಕ್ಕಿಂತ ಅತ್ಯಂತ ಹೆಚ್ಚಿನ ಬಸ್‌ದರವನ್ನು ಪ್ರಯಾಣಿಕರ ಮೇಲೆ ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೆಚ್ಚಿನ ಬಸ್‌ದರವನ್ನು ಪ್ರಯಾಣಿಕರಿಂದ ವಸೂಲು ಮಾಡಲು ಕಾನೂನು ಅಥವಾ ನಿಯಮಗಳಲ್ಲಿ ಅವಕಾಶವೇನಾದರೂ ಇದೆಯೇ; (ವಿವರ ನೀಡುವುದು)

(ಆ) ಇದ್ದಲ್ಲಿ, ನಿಯಮ ಬಾಹಿರವಾಗಿ ಬಸ್ ದರ ನಿಗದಿಪಡಿಸುತ್ತಿರುವ ಖಾಸಗಿ ಸಾರಿಗೆ ಸಂಸ್ಥೆಗಳ ಮೇಲೆ ಕಾನೂನು ಕ್ರಮ ಕೈಗೊಳ್ಳದಿರಲು ಕಾರಣವೇನು;

(ಇ) ಅ ವೈಜ್ಞಾನಿಕವಾಗಿ ಬಸ್ ಪ್ರಯಾಣ ದರ ವಿಧಿಸುತ್ತಿರುವುದನ್ನು ತಡೆಯಲು ಸರ್ಕಾರ ಏನು ಕ್ರಮ ಕೈಗೊಂಡಿದೆ?